# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮತ್ತಿಕೆರೆ ಉಪವಿಭಾಗದ ವಾರ್ಡ್ ಸಂಖ್ಯೆ:36 ಮತ್ತಿಕೆರೆ

ಕಛೇರಿಯಲ್ಲಿ ದಿನಾಂಕ: 15-09-2021 ರಂದು ನಡೆದ ಮೀಟಿಂಗ್ ನಡವಳಿಗಳು

**ವಿಷಯ :** ಪಾಲಿಕೆ ಎಲ್ಲಾ ವಾರ್ಡ್‌ಗಳಲ್ಲಿ "Ward Decentralized Triage and Emergency Response (DETER) " Committee for Covid-19 Management (WDC) ರಚಿಸುವ ಕುರಿತು.

**ಉಲ್ಲೇಖ :** 1. ವಾರ್ಡ್ ಕಮಿಟಿ ನೋಡಲ್ ಅಧಿಕಾರಿಗಳನ್ನು ನೇಮಿಸಿರುವ ಕಛೇರಿ ಆದೇಶದ ಸಂಖ್ಯೆ ಬಿ12(5)ಪಿ.ಆರ್/35/20-21, ದಿನಾಂಕ : 16.04.2021

2. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ನಂ.RD 158 TNR 2020, ದಿನಾಂಕ :07-05-2021
3. ಈ ಕಛೇರಿಯ ಸಭಾ ಸೂಚನೆ ಪತ್ರದ ದಿನಾಂಕ :

---

ಉಲ್ಲೇಖ (1)ರ ಸಭಾ ಸೂಚನಾ ಪತ್ರದ ಅನುಸಾರ ಉಲ್ಲೇಖ (2) ರ ಆದೇಶದ ಅಂಶಗಳನ್ನು ಪರಿಶೀಲಿಸಲು ದಿನಾಂಕ:15-09-2021 ರಂದು ಮತ್ತಿಕೆರೆ ವಾರ್ಡ್ ನಂ.36ರ ಕಾರ್ಯಾಲಯದಲ್ಲಿ ವಾರ್ಡ್ ಕಮಿಟಿ ಸಮಿತಿ ಸಭೆಯನ್ನು ಉಲ್ಲೇಖ ಪತ್ರ (3) ರಂತೆ ಬೆಳಗ್ಗೆ 11-30 ಗಂಟೆಗೆ ಕರೆಯಲಾಗಿದ್ದು, ಸದರಿ ಸಭೆಯ ನಡವಳಿಗಳು.

ಸದಸ್ಯರು ಕಾರ್ಯದರ್ಶಿಗಳು ಕಮಿಟಿ ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ಎಲ್ಲರನ್ನು ಸ್ವಾಗತಿಸಿದರು.

ಶ್ರೀ ಜೆ.ಬಿ. ಶ್ರೀಧರ್ ಮೂರ್ತಿ, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ, ವಾರ್ಡ್ ಸಂಖ್ಯೆ:36ರ ವಾರ್ಡ್ ಕಮಿಟಿ ರವರು ಮಾತನಾಡುತ್ತಾ, ಉಲ್ಲೇಖ (2) ರ ಆದೇಶವನ್ನು ವಿವರಿಸುತ್ತಾ ವಾರ್ಡ್ ನಂ.36ರಲ್ಲಿ "Ward Decentralized Triage and Emergency Response (DETER)" Committee for Covid-19 Management (WDC) ಯ ಸಮಿತಿ ರಚನೆ ವಾರ್ಡ್ ಮಟ್ಟದ ಕೋವಿಡ್ ನಿರ್ವಹಣೆ WDC (ವಾರ್ಡ್ ವಿಕೇಂದ್ರೀಕೃತ ಚಿಕಿತ್ಸೆಯ ಸರದಿ ನಿರ್ಧಾರ ಮತ್ತು ತುರ್ತು ಪ್ರತಿಕ್ರಿಯೆ ಕೇಂದ್ರ ರಚನೆ, ಸ್ವರೂಪ, ತಡೆ ಸಮಿತಿ) ಕಾರ್ಯವಿಧಾನ, ಅಗತ್ಯತೆ ಹಾಗೂ ಕೋವಿಡ್-19 ರ ನಿಯಂತ್ರಣ ಹಾಗೂ ಚಿಕಿತ್ಸೆ ಸಂಬಂಧ ತೆಗೆದುಕೊಳ್ಳಬೇಕಾದ ಕಾರ್ಯಗಳ ಬಗ್ಗೆ ಸಭೆಗೆ ವಿವರವಾಗಿ ತಿಳಿಸಿದರು.

1. ಹಿಂದಿನ ಸಭೆಗಳಲ್ಲಿ ನಿರ್ಣಯಗಳ ಅನುಪಾಲನೆ ಹಾಗೂ ಸಾರ್ವಜನಿಕರಿಗೆ ಸಮರ್ಪಕ ಸೇವೆ ನೀಡುವ ಬಗ್ಗೆ ಹಿಂದಿನ ಸಭೆಗಳಲ್ಲಿ ತೆಗೆದುಕೊಂಡ ನಿರ್ಧಾರಗಳಿಗೆ ಅನುಪಾಲನೆ ಮತ್ತು ವಾರ್ಡ್‌ನಲ್ಲಿ ಸಾರ್ವಜನಿಕರ ದಿನನಿತ್ಯ ಮೂಲಭೂತ ಸೌಕರ್ಯಗಳು ಹಾಗೂ ಸೇವೆ ಒದಗಿಸುವ ಸಂಬಂಧ ನಿರಂತರವಾಗಿ ಕ್ರಮವಹಿಸಲು ಹಾಜರಿದ್ದ ಎಲ್ಲಾ ಬಿ.ಬಿ.ಎಂ.ಪಿ. ಅಧಿಕಾರಿ ಸಿಬ್ಬಂದಿಯವರಿಗೆ ತಿಳಿಸಿದರು.
2. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯ ಘನತ್ಯಾಜ್ಯ ವಿಲೇವಾರಿಗೆ ಸಂಬಂಧಿಸಿದಂತೆ ಮೂಲದಿಂದಲೇ ಕಸ ವಿಂಗಡನೆ ಮಾಡುವ ಕಾರ್ಯವನ್ನು ಅಭಿವೃದ್ಧಿಗೊಳಿಸಲು ಸೂಚಿಸಿದರೂ ಹಾಗೂ ವಾರ್ಡಿನಲ್ಲಿ ರುವ ಬ್ಲಾಕ್ ಸ್ಪಾಟ್‌ಗಳ ಸಂಖ್ಯೆಗಳನ್ನು ಕಡಿಮೆ ಮಾಡಲು ಸಂಬಂಧಪಟ್ಟ ಅಧಿಕಾರಿಗಳು ಈ ಬಗ್ಗೆ ಅಗತ್ಯ ಕ್ರಮಕೈಗೊಳ್ಳಲು ರವರು ಸೂಚಿಸಿದರು.
3. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿ ಬಿ.ಬಿ.ಎಂ.ಪಿ ಮಾರ್ಷಲ್‌ಗಳು ಒಟ್ಟು ರೂ.15000/-ಗಳ ದಂಡ ವಸೂಲಿ ಮಾಡಿರುತ್ತಾರೆ. ಎಂದು ಸಭೆಯಲ್ಲಿ ತಿಳಿಸಲಾಯಿತು
4. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿದ್ದು ಈ ಬಗ್ಗೆ ಸಂಬಂಧಪಟ್ಟ ವಾರ್ಡ್ ಇಂಜಿನೀಯರ್ ರವರು ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದರು.

ಪು.ತಿ.ನೋ

5. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿ ಚರಂಡಿಗಳ ಕಲ್ಲು ಒಡೆದು ಹೋಗಿದ್ದು, ಇವುಗಳನ್ನು ಸರಿಪಡಿಸಲು ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಕಾಮಗಾರಿ ಇಲಾಖೆಯ ವಾರ್ಡ್ ಇಂಜಿನೀಯರ್ ರವರಿಗೆ ತಿಳಿಸಲಾಯಿತು.

6. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿ ನಡೆದ ಸಭೆಯಲ್ಲಿ ಆರೋಗ್ಯ ಇಲಾಖೆ ಅಧಿಕಾರಿ ರವರು ಮಾತನಾಡಿ ವ್ಯಾಕ್ಸಿನೇಷನ್ ಬಗ್ಗೆ ಸರ್ವೆ ಕಾರ್ಯ ಮಾಡಲಾಗುತ್ತಿದೆ. ಹಾಗೂ ವಿವರ ಈ ಕೆಳಕಂಡಂತಿರುತ್ತದೆ ಎಂದು ತಿಳಿಸಿದರು

7. ವಾರ್ಡ್ ಸಂಖ್ಯೆ:36, ಮತ್ತಿಕೆರೆ ವ್ಯಾಪ್ತಿಯಲ್ಲಿ ಹಸುಗಳು ಎಲ್ಲೆಂದರಲ್ಲಿ ಓಡಾಡುತ್ತಿದ್ದು, ಸಗಣಿಯನ್ನು ರಸ್ತೆಗಳಲ್ಲಿ ಹಾಕುತ್ತಿದ್ದು, ಇದರಿಂದ ಸಾರ್ವಜನಿಕರು ಹಾಗೂ ವಾಹನಗಳ ಓಡಾಟಕ್ಕೆ ಅನಾನೂಕೂಲವುಂಟಾಗುತ್ತಿರುತ್ತದೆ ಈ ಬಗ್ಗೆ ಸಂಬಂಧಪಟ್ಟ ಪಶುಸಂಗೋಪನಾ ಇಲಾಖೆ ಅಧಿಕಾರಿಗಳು ಕ್ರಮಕೈಗೊಳ್ಳಲು ಸೂಚಿಸಲಾಯಿತು

ಈ ಎಲ್ಲಾ ಕ್ರಮಗಳನ್ನು ತ್ವರಿತವಾಗಿ, ಆದ್ಯತೆ ಮೇಲೆ ಕೈಗೊಂಡು ಮುಂಬರುವ ಸಭೆಯಲ್ಲಿ ಮಂಡಿಸಲು ಸೂಚಿಸಿ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಂದನೆಗಳೊಂದಿಗೆ,

Sushma. M

(ಸುಷ್ಮಾ)
ಸದಸ್ಯ ಕಾರ್ಯದರ್ಶಿ,
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್ ಸಂಖ್ಯೆ:36, ಮತ್ತಿಕೆರೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

(ಜೆ.ಬಿ.ಶ್ರೀಧರ್ ಮೂರ್ತಿ)).
ಅಧ್ಯಕ್ಷರು,
ವಾರ್ಡ್ ಸಂಖ್ಯೆ:36, ಮತ್ತಿಕೆರೆ.